**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ. ಸಂಖ್ಯೆಃ 972/2023**

**ಫಿರ್ಯಾದಿ** ಃ ಶ್ರೀ ವಿ.ಕರುಣಾಕರ ಬಿನ್ ವೇಲಾಯುದಿನ್,
ವಯಸ್ಸು ಸುಮಾರು 55 ವರ್ಷ,
ವಾಸಃ ಚಿನ್ನಿಗಾ ಗ್ರಾಮ, ಜನ್ನಾಪುರ ಅಂಚೆ,
ಗೋಣಿಬೀಡು ಹೋಬಳಿ, ಮೂಡಿಗೆರೆ ತಾಲ್ಲೂಕು.

**ವಿರುದ್ಧ**

**ಆರೋಪಿ** ಃ ಶ್ರೀ ಜೆ.ಬಿ.ಸಂತೋಷ್ ಕುಮಾರ್ ಯಾನೆ ಸಂತೋಷ್,
ಬಿನ್ ದಿಃ ಬಾಬಣ್ಣ,
ವಯಸ್ಸು ಸುಮಾರು 35 ವರ್ಷ,
ವಾಸಃ ಜನ್ನಾಪುರ, ಚಿನ್ನಿಗಾ ಗ್ರಾಮ,
ಜನ್ನಾಪುರ ಅಂಚೆ, ಗೋಣಿಬೀಡು ಹೋಬಳಿ,
ಮೂಡಿಗೆರೆ ತಾಲ್ಲೂಕು.

**ಆಪಾದನೆಯ ಸಾರಾಂಶ**

ನಾನು ಶ್ರೀ ಸಚಿನ್.ಡಿ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಫಿರ್ಯಾದಿಯನ್ನು ಸಂಪರ್ಕಿಸಿ, ನಿಮ್ಮ ತುರ್ತು ಕೃಷಿ ಉದ್ದೇಶಕ್ಕಾಗಿ ಮತ್ತು ಕುಟುಂಬದ ಅವಶ್ಯಕತೆಗಳಿಗೋಸ್ಕರ ಅವರಿಂದ ರೂ.2,33,700/-ಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಸಾಲದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್, ಜನ್ನಾಪುರ ಶಾಖೆಯ ಚೆಕ್ ಸಂಖ್ಯೆಃ008920, ದಿನಾಂಕ 31.09.2022, ರೂ.2,33,700/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕೆನರಾ ಬ್ಯಾಂಕ್, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ (Funds insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 11.01.2023 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟರುಮೆಂಟ್

ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 15.09.2023 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

Sd/-

ಮೂಡಿಗೆರೆ
ದಿನಾಂಕಃ 15.09.2023

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.